ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ- ಕರ್ನಾಟಕ
ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳ
ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು -೫೬೦ ೦೦೧

ಸಂಖ್ಯೆ : ಆರ್.ಎಂ.ಎಸ್.ಎ./ಆ.ವಿ.ಪ್ರ.ಪರೀಕ್ಷೆ/2018-19ರ-ದಾಖಲಾತಿ/2017-18 ದಿನಾಂಕ : **16-02-2018**

## ಸುತ್ತೋಲೆ

**ವಿಷಯ:** 2018-19ನೇ ಸಾಲಿನ ಆದರ್ಶ ವಿದ್ಯಾಲಯಗಳ 6ನೇ ತರಗತಿಯ ದಾಖಲಾತಿಗಾಗಿ ನಡೆಸಲಾಗುವ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಸುತ್ತೋಲೆ ಸಂಖ್ಯೆ : ಆರ್.ಎಂ.ಎಸ್.ಎ./ಆ.ವಿ.ಪ್ರ.ಪರೀಕ್ಷೆ/2018-19ರ-ದಾಖಲಾತಿ/2017-18 ದಿನಾಂಕ : 22/01/2018

***********

ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2018-19ನೇ ಸಾಲಿನ ಆದರ್ಶ ವಿದ್ಯಾಲಯಗಳ 6ನೇ ತರಗತಿಯ ದಾಖಲಾತಿಗಾಗಿ ನಡೆಸಲಾಗುವ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ 20/02/2018 ರಂದು ರಾತ್ರಿ 9.00 ಗಂಟೆಯವರೆಗೆ ವಿಸ್ತರಿಸಲಾಗಿದೆ.

ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಈ ಬಗ್ಗೆ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಿದೆ.

ಅರ್ಜಿಗಳನ್ನು ಪರಿಶೀಲಿಸಲು ಆದರ್ಶ ವಿದ್ಯಾಲಯಗಳ ಮುಖ್ಯೋಪಾಧ್ಯಾಯರಿಗೆ ದಿನಾಂಕ 21/02/2018 ರಂದು ಅಪರಾಹ್ನ 3.00 ಗಂಟೆಯವರೆಗೆ ವಿಸ್ತರಿಸಲಾಗಿದೆ ತದನಂತರ ಯಾವುದೇ ಪ್ರಕ್ರಿಯೆಯನ್ನು ಮುಖ್ಯೋಪಾಧ್ಯಾಯರು ವಿದ್ಯಾವಾಹಿನಿಯ ತಂತ್ರಾಂಶದಲ್ಲಿ ನಿರ್ವಹಿಸಲು ಸಾಧ್ಯವಾಗುವುದಿಲ್ಲ.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರೀಕ್ಷಾ ಕೇಂದ್ರಗಳ ವಿವರವನ್ನು ದಿನಾಂಕ 17/02/2018 ರಂದು ಸಂಜೆ 5.30ರೊಳಗೆ ಪಿನ್ ಕೋಡ್ ಹಾಗೂ ಸರಿಯಾದ spellingನಿಂದ ಕೂಡಿರುವ ಮಾಹಿತಿಯನ್ನು ನಮೂದಿಸುವಂತೆ ತಿಳಿಸಿದೆ.

ರಾಜ್ಯ ಯೋಜನಾ ನಿರ್ದೇಶಕರು
ಸರ್ವ ಶಿಕ್ಷಣ ಅಭಿಯಾನ
ಮತ್ತು
ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ
ಬೆಂಗಳೂರು

16/2/18

ಗೆ,

1. ಕಾರ್ಯನಿರ್ವಾಹಕ ನಿರ್ದೇಶಕರು, ಕೆ.ಎಸ್.ಕ್ಯೂ.ಎ.ಎ.ಸಿ, ಬೆಂಗಳೂರು.
2. ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಮತ್ತು ಡಿ.ವೈ.ಪಿ.ಸಿ (ಆರ್.ಎಂ.ಎಸ್.ಎ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
3. ಸಂಬಂಧಿಸಿದ ಉಪನಿರ್ದೇಶಕರು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಆದರ್ಶ ವಿದ್ಯಾಲಯಗಳ ಮುಖ್ಯ ಶಿಕ್ಷಕರು ಮತ್ತು ಸೇವಾ ಕೇಂದ್ರಗಳ ಮುಖ್ಯಸ್ಥರ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಗೌರವಪೂರ್ವಕವಾಗಿ**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ರವರಿಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಸಲ್ಲಿಸಿದೆ.
3. ಅಪರ ಆಯುಕ್ತರು, ಗುಲ್ಬರ್ಗಾ ಮತ್ತು ಧಾರವಾಡ ಆಯುಕ್ತಾಲಯ ರವರಿಗೆ ಅಗತ್ಯ ಕ್ರಮಕ್ಕಾಗಿ.
4. ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರಿಗೆ ಅಗತ್ಯ ಕ್ರಮಕ್ಕಾಗಿ.
5. ನಿರ್ದೇಶಕರುಗಳು, ಎಲ್ಲಾ ಅಪರ ಆಯುಕ್ತರ ಕಛೇರಿಗಳು ರವರಿಗೆ ಅಗತ್ಯ ಕ್ರಮಕ್ಕಾಗಿ..
6. ಕಛೇರಿ ಪ್ರತಿ.